# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ದಿನಾಂಕ:06/01/2022ರ ಗುರುವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು ವಾರ್ಡ್–145
3. ಸಹಾಯಕ ಇಂಜಿನಿಯರ್ (ಬೆಸ್ಕಾಂ)
4. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.
5. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–145.
6. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.
7. ತೋಟಗಾರಿಕೆ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145.
8. ಕಿರಿಯ ಇಂಜಿನಿಯರ್ (ವಿದ್ಯುತ್ ವಿಭಾಗ ಬಿಬಿಎಂಪಿ)

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಸಹಾಯಕ ಇಂಜಿನಿಯರ್ (BWSSB)
2. ಪೋಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
3. ವಿಲ್ಸನ್‌ಗಾರ್ಡನ್ ಪೋಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
4. ವಿಲ್ಸನ್‌ಗಾರ್ಡನ್ ಪೋಲೀಸ್ ಠಾಣೆ ಸಂಚಾರ ವಾರ್ಡ್ 145.

**********

1. ವಿಲ್ಸನ್‌ಗಾರ್ಡನ್ ಏರಿಯಾದಲ್ಲಿರುವ ಹೂವಿನ ಅಂಗಡಿಗಳಿಂದ ಸ್ಥಳೀಯ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ನಾಗರೀಕರು ಸಭೆಯಲ್ಲಿ ಚರ್ಚಿಸಿದರು, ಮನೆಗಳಲ್ಲಿ ಹೂವಿನ ಅಂಗಡಿಗಳನ್ನು ನಡೆಸುತ್ತಿದ್ದು, ಸದರಿ ಮನೆಗಳಿಂದ ಅಂಗಡಿಗಳನ್ನು ತೆರವುಗೊಳಿಸಲು ಕೋರಿದರು– ಆರೋಗ್ಯ ಇಲಾಖೆಯಿಂದ ಆರೋಗ್ಯ ವೈದ್ಯಾಧಿಕಾರಿಗಳು ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು ಚರ್ಚಿಸಿ ಸದರಿ ವಿಷಯದ ಬಗ್ಗೆ ಕಾನೂನಿನ ನಿಯಮಾನುಸಾರ ಕ್ರಮ ಕೈಗೊಳ್ಳಲು ಅಧ್ಯಕ್ಷರು ಸೂಚಿಸಿದರು.

Scanned with CamScanner

2. ಹೂವಿನ ಅಂಗಡಿಯ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳು ಹಾಗೂ ಸ್ಥಳೀಯ ಪೋಲೀಸ್ ಠಾಣೆಗೆ ಪತ್ರ ಬರೆಯಲು ಸಭೆಯಲ್ಲಿ ಸಾರ್ವಜನಿಕರು ಕೋರಿದರು-ಅಧ್ಯಕ್ಷರು ಮಾತನಾಡಿ ಒಪ್ಪಿಗೆ ಸೂಚಿಸಿದರು.

3. ವಿಲ್ಸನ್‌ಗಾರ್ಡನ್ ರಾಣಿ ಪಾರ್ಕ್ ಮೇಲ್ಭಾಗದಲ್ಲಿ ಇರುವ ತ್ರಿಕೋಣಾಕಾರದಲ್ಲಿರುವ ಚಿಕ್ಕ ಜಾಗದಲ್ಲಿ ಕಲ್ಲಿನ ಕಟ್ಟಡ ಕಟ್ಟಿ ಗ್ರಿಲ್ಸ್‌ಗಳನ್ನು ನಿರ್ಮಿಸಿದ್ದು, ಗೇಟ್‌ನ್ನು ನಿರ್ಮಿಸಿರುವ ಜಾಗದಲ್ಲಿ ಮಣ್ಣು ರಸ್ತೆಗೆ ಬಾರದಿರುವಂತೆ ಕಲ್ಲಿನ ಕಟ್ಟಡ ನಿರ್ಮಿಸುವಂತೆ ಶ್ರೀ. ಶಂಕರ್, ಸಾರ್ವಜನಿಕರು ಸಭೆಯಲ್ಲಿ ಕೋರಿದರು-ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ವಾರ್ಡ್ ಇಂಜಿನಿಯರ್‌ರವರಿಗೆ ಅಧ್ಯಕ್ಷರು ತಿಳಿಸಿದರು.

4. ಮುಂದಿನ ವಾರ್ಡ್ ಸಭೆಯಲ್ಲಿ ರೆಡ್‌ಫೀಲ್ಡ್ ಕಾಮಗಾರಿ ಬಗ್ಗೆ ಚರ್ಚಿಸಲು ಸಂಬಂಧಿಸಿದ ಇಂಜನಿಯರ್‌ರವರಿಗೆ ಸಭೆಗೆ ಆಹ್ವಾನಿಸಲು ಸ್ಥಳೀಯರು ಸಭೆಯಲ್ಲಿ ಕೋರಿದರು- ಸದರಿ ಕಾಮಗಾರಿಯನ್ನು ಯೋಜನೆ-ದಕ್ಷಿಣ ವಿಭಾಗದಿಂದ ಕೈಗೊಂಡಿದ್ದು, ಮುಂದಿನ ಸಭೆಗೆ ಸದರಿ ವಿಭಾಗದ ಇಂಜನಿಯರ್ ರವರನ್ನು ಆಹ್ವಾನಿಸಲಾಗುವುದೆಂದು ವಾರ್ಡಿನ ಅಭಿಯಂತರರು ಸಭೆಗೆ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ - 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ - 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner